ಮೀನುಗಾರಿಕೆ ವಸತಿ ನಿರ್ಮಾಣ.

2926:(3874)

ಶ್ರೀ ಎನ್.ಯೋಗೀಶ್‌ಭಟ್ (ಮಂಗಳೂರು): ಮಾನ್ಯ ಬಂದರು ಮತ್ತು ಮೀನುಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಮಂಗಳೂರು ಹೊಗೆ ಬಜಾರ್ ಬಂದರು ಪ್ರದೇಶ ಬೊಳೂರು ಬೊಕ್ಕಪಟ್ನ ಸುಲ್ತಾನ ಬತ್ತೇರಿಗಳಲ್ಲಿ ಹೂಳೆತ್ತುವಿಕೆ ತಡೆಗೋಡೆ ನಿರ್ಮಾಣ ಕಾರ್ಯವನ್ನು ಯಾವಾಗ ಮಾಡಲಾಗುವುದು ಇದಕ್ಕೆ ತಗಲುವ ವೆಚ್ಚವೆಷ್ಟು? ಮಂಗಳೂರಿನಲ್ಲಿ ಮೀನುಗಾರಿಕೆ ವಸತಿ ನಿರ್ಮಾಣಕ್ಕೆ ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಕೆ.ಜಯಪ್ರಕಾಶ್ ಹೆಗ್ಡೆ (ಬಂದರು ಮತ್ತು ಮೀನುಗಾರಿಕೆ ಸಚಿವರು):

1) ಮಂಗಳೂರು ವಾಣಿಜ್ಯ ಬಂದರು ಮತ್ತು ಮೀನುಗಾರಿಕೆ ಬಂದರುಗಳಲ್ಲಿ ಮಾತ್ರ ಹೂಳೆತ್ತುವಿಕೆ ನೆರವೇರಿಸಲಾಗುತ್ತದೆ. ಇದನ್ನು ಹೊರತುಪಡಿಸಿ ಬೇರೆ ಸ್ಥಳದಲ್ಲಿ ಹೂಳೆತ್ತುವಿಕೆಗೆ ಯಾವ ಯೋಜನೆಯನ್ನು ಹಮ್ಮಿಕೊಂಡಿರುವುದಿಲ್ಲ. ಹೊಗೆ ಬಜಾರ್ ಸಮೀಪ ಹೂಳು ತುಂಬಿದ ಪ್ರದೇಶಕ್ಕೆ ತಡೆಗೋಡೆ ನಿರ್ಮಿಸುವ ಬಗ್ಗೆ ಕ್ರಮ ತೆಗೆದುಕೊಳ್ಳಲಾಗುತ್ತಿದೆ. ಈ ತಡೆಗೋಡೆಗೆ ಸುಮಾರು ರೂ.60.00 ಲಕ್ಷ ವೆಚ್ಚವಾಗುವ ನಿರೀಕ್ಷೆಯಿದೆ. ಕೇಂದ್ರ ಪುರಸ್ಕೃತ ಯೋಜನೆಯಡಿಯಲ್ಲಿ ವಸತಿ ರಹಿತ ವೃತ್ತಿಪರ ಅರ್ಹ ಮೀನುಗಾರರಿಗೆ ಮನೆಗಳನ್ನು ಉಚಿತವಾಗಿ ಕಟ್ಟಿಸಿಕೊಡುವ ಯೋಜನೆಯಡಿಯಲ್ಲಿ ಮಂಗಳೂರಿನಲ್ಲಿ (ಮಂಗಳೂರು ತಾಲ್ಲೂಕು) ಇದುವರೆಗೆ 30 ಮನೆಗಳನ್ನು ಮಂಜೂರು ಮಾಡಲಾಗಿದೆ.

ಕರಾವಳಿ ಪ್ರದೇಶದ ಅಭಿವೃದ್ಧಿಗೆ ವಿಶ್ವಬ್ಯಾಂಕ್ ನೆರವು

2927:(3872)

ಶ್ರೀ ಎಸ್.ಯೋಗೀಶ್ ಭಟ್ (ಮಂಗಳೂರು): ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ವಿಶ್ವಬ್ಯಾಂಕ್ ಎಷ್ಟು ನೆರವು ನೀಡಲು ಒಪ್ಪಿದೆ? ಕರಾವಳಿ ಪ್ರದೇಶ ಹಾಗೂ ಮಂಗಳೂರು ನಗರಾಭಿವೃದ್ಧಿ, ಹಾಗೂ ಇತರೆ ಯಾವ ಯೋಜನೆಗಳಿಗೆ ಎಷ್ಟು ಹಣ ಮಂಜೂರಾತಿ ನೀಡಲು ಸರ್ಕಾರ ಉದ್ದೇಶಿಸಿದೆ?

ಶ್ರಿ.ಸಿದ್ದರಾಮಯ್ಯ (ಉಪ ಮುಖ್ಯಮಂತ್ರಿಗಳು):

ಅ) ವಿಶ್ವ ಬ್ಯಾಂಕ್ ನೆರವಿನ ಪಾಲು ರ.391.14 ಕೋಟಿ ರೂಪಾಯಿಗಳುಳ್ಳ 1198.80

ಕೋಟಿ ರೂಪಾಯಿಗಳ ವೆಚ್ಚದ ನಾಲ್ಕು ಯೋಜನೆಗಳು ಈಗ ರಾಜ್ಯದಲ್ಲಿ ಜಾರಿಯಲ್ಲಿವೆ. ಕರಾವಳಿ ಪ್ರದೇಶ ಹಾಗೂ ಮಂಗಳೂರು ನಗರಾಭಿವೃದ್ಧಿಗಾಗಿ ಏಷ್ಯನ್ ಅಭಿವೃದ್ಧಿ ಬ್ಯಾಂಕಿನಿಂದ ನೆರವನ್ನು ಪಡೆಯಲು ಉದ್ದೇಶಿಸಿ ಯೋಜನೆಯನ್ನು ರೂಪಿಸಲಾಗುತ್ತಿದೆ. ಯೋಜನೆಯ ವರದಿ ಸಿದ್ದವಾದ ನಂತರ ನೆರವಿನ ಪ್ರಮಾಣ ಸ್ಪಷ್ಟವಾಗಿ ಗೊತ್ತಾಗುತ್ತದೆ.

ಹೊಸ ಜಿಲ್ಲೆಗಳಿಗೆ ಜಿಲ್ಲಾ ನ್ಯಾಯಾಲಯಗಳ ಸ್ಥಾಪನೆ ಬಗ್ಗೆ.

2928:(4124)

ಶ್ರೀ.ವಾಟಾಳ್ ನಾಗರಾಜ್ (ಚಾಮರಾಜನಗರ): ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರ ಶಾಸನ ರಚನೆ, ವಾರ್ತಾ ಮತ್ತು ಪ್ರಚಾರ ಹಾಗೂ ಪ್ರವಾಸೋದ್ಯಮ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಾಮರಾಜನಗರವು ಸೇರಿದಂತೆ 7 ಹೊಸ ಜಿಲ್ಲೆಗಳಲ್ಲಿ ಜಿಲ್ಲಾ ನ್ಯಾಯಾಲಯಗಳನ್ನು ಯಾವಾಗ ಸ್ಥಾಪಿಸಲಾಗುವುದು?

ಆ) ಕರ್ನಾಟಕ ರಾಜ್ಯದಲ್ಲಿ ಎಷ್ಟು ಕಾರ್ಮಿಕ ನ್ಯಾಯಾಲಯಗಳು ಇವೆ?

ಇ) ಕಾರ್ಮಿಕ ನ್ಯಾಯಾಲಯದಲ್ಲಿ ಕೊರತೆ ಇರುವ ನ್ಯಾಯಾಧೀಶರ ಸಂಖ್ಯೆ ಎಷ್ಟು?

ಶ್ರೀ ಎಂ.ಸಿ.ನಾಣಯ್ಯ (ಕಾನೂನು ಸಚಿವರು):

ಅ) ಚಾಮರಾಜನಗರ ಜಿಲ್ಲೆಯೂ ಸೇರಿದಂತೆ ಎಲ್ಲಾ 7 ಹೊಸ ಜಿಲ್ಲೆಗಳಿಗೆ ಜಿಲ್ಲಾ ಮತ್ತು ಸತ್ರನ್ಯಾಯಾಲಯಗಳನ್ನು ಸ್ಥಾಪಿಸುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ. ಈ ನ್ಯಾಯಾಲಯಗಳಿಗೆ ಹುದ್ದೆಗಳನ್ನು ಸೃಜಿಸುವುದು ಒಳಗೊಂಡಂತೆ ಕಟ್ಟಡಗಳನ್ನು ಗುರುತಿಸುವುದು ಹಾಗೂ ನ್ಯಾಯಾಲಯಗಳನ್ನು ಸ್ಥಾಪಿಸಲು ಅವಶ್ಯವಾದ ಇತರೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ಆ) ಕರ್ನಾಟಕ ರಾಜ್ಯದಲ್ಲಿ 12 ಕಾರ್ಮಿಕ ನ್ಯಾಯಾಲಯಗಳಿವೆ.

ಇ) ಈ ನ್ಯಾಯಾಲಯದಲ್ಲಿ ನ್ಯಾಯಾಧೀಶರ ಕೊರತೆ ಇರುವುದಿಲ್ಲ.

ನವ ದೆಹಲಿಯಲ್ಲಿನ ವಾರ್ತಾ ಇಲಾಖೆಯ ಕಾರ್ಯವನ್ನು ಉತ್ತಮ ಪಡಿಸುವುದು.

2929:(4125)

ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ): ಮಾನ್ಯ ವಾರ್ತಾ ಮತ್ತು ಪ್ರಚಾರ